ಕರ್ನಾಟಕ ವಿಧಾನಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 26-03-2021 ಪ್ರಶ್ನೆ ಸಂಖ್ಯೆ : 1900(2235)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಡಾ|| ಚಂದ್ರಶೇಖರ್ ಬಿ. ಪಾಟೀಲ್(ಪದವೀಧರರ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 26-03-2021

ಉತ್ತರಿಸುವ ಸಚಿವರು: ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು

ವಿಷಯ : ಕಲಬುರಗಿ ಮತ್ತು ಬೀದರ್ ಜಿಲ್ಲೆಯ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಗೆ ಅನುದಾನ ಕುರಿತು

(ಅ) ಕಲಬುರಗಿ ಮತ್ತು ಬೀದರ್ ಜಿಲ್ಲೆಗೆ 2018-19 ನೇ ಸಾಲಿನಿಂದ 2020-2021 ನೇ ಸಾಲಿನವರೆಗೆ ಅಲ್ಪಸಂಖ್ಯಾತರ ಇಲಾಖೆಗೆ ಒದಗಿಸಲಾಗಿರುವ ಅನುದಾನ ಎಷ್ಟು; ಹಾಗೂ ಖರ್ಚು ಮಾಡಿದ ಅನುದಾನ ಎಷ್ಟು; ಹಾಗೂ ಉಳಿದ ಅನುದಾನದ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು; (ಸಂಪೂರ್ಣ ಮಾಹಿತಿಯನ್ನು ಒದಗಿಸುವುದು)

(ಆ) ಈ ಜಿಲ್ಲೆಗಳಿಗೆ 2018-19 ರಿಂದ 2020-21ನೇ ಸಾಲಿನಲ್ಲಿ ಕ್ರಿಶ್ಚಿಯನ್, ಜೈನ್, ಬೌದ್ಧ ಮತ್ತು ಸಿಖ್ ಸಮುದಾಯಗಳ ಅಭಿವೃದ್ಧಿಗಾಗಿ ಬಂದಿರುವ ಅನುದಾನ ಎಷ್ಟು; ಮತ್ತು ಬಳಕೆ ಆಗದಿರುವ ಅನುದಾನ ಎಷ್ಟು; ಅದಕ್ಕೆ ಕಾರಣವೇನು; (ವರ್ಷವಾರು ವಿವರವಾದ ಮಾಹಿತಿ ನೀಡುವುದು)

(ಇ) ಈ ಜಿಲ್ಲೆಗಳಿಗೆ 2018-19 ರಿಂದ 2020-21ನೇ ಸಾಲಿನಲ್ಲಿ ಪ್ರಧಾನ ಮಂತ್ರಿ ಜನ ವಿಕಾಸ ಕಾರ್ಯಕ್ರಮ (ಎಂ.ಎಸ್.ಡಿ.ಪಿ)ಕ್ಕೆ ಬಂದಿರುವ ಅನುದಾನ ಎಷ್ಟು; ಆ ಪೈಕಿ ಬಳಕೆಯಾದ ಅನುದಾನ ಎಷ್ಟು; ಮತ್ತು ಬಳಕೆ ಆಗದ ಅನುದಾನ ಎಷ್ಟು? (ವಿವರವಾದ ಮಾಹಿತಿ ನೀಡುವುದು)